# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಬುಧವಾರ, ೧೩ ಆಗಸ್ಟ್, ೨೦೨೫ (ಶ್ರಾವಣ ೨೨, ಶಕವರ್ಷ ೧೯೪೭)<br>BENGALURU, WEDNESDAY, 13 AUGUST, 2025 (SHRAVANA 22, SHAKAVARSHA 1947) | ನಂ. ೪೭೫<br>No.475 |
|---|---|---|

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2025-26ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸುವ ಕುರಿತು.

**ಓದಲಾಗಿದೆ:**
1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಏಕ ಕಡತ ಸಂಖ್ಯೆ: DPI-CPI0C4-5(OCMT) /1/2025-SEC-EST4 (1794970).
2. 2025-26ನೇ ಸಾಲಿನ ಬಜೆಟ್ ಘೋಷಿತ ಕಾರ್ಯಕ್ರಮಗಳ ಅಡಿಯಲ್ಲಿ 100 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳಾಗಿ ಉನ್ನತೀಕರಿಸುವ ಬಗ್ಗೆ ಘೋಷಣೆ.

*-*-*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರು 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-110ರಲ್ಲಿ ಘೋಷಿಸಿರುವಂತೆ 100 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಉನ್ನತೀಕರಿಸಲು ಅರ್ಹವಿರುವ ಶಾಲೆಗಳ ಬಗ್ಗೆ ವರದಿ ಪಡೆದು ಉನ್ನತೀಕರಿಸಲು ಉದ್ದೇಶಿಸಿರುವ ಶಾಲೆಗಳಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳನ್ನು ಉನ್ನತೀಕರಿಸಬೇಕೆಂಬ ಬಗ್ಗೆ ಸೂಕ್ತ ನಿರ್ಣಯ ಕೈಗೊಂಡು ಅರ್ಹ ಶಾಲೆಗಳ ಪಟ್ಟಿಯನ್ನು ತಯಾರಿಸಿ (KPS ಶಾಲೆಗಳ ಪಟ್ಟಿಯಲ್ಲಿರುವ ಶಾಲೆಗಳನ್ನು ಹೊರತುಪಡಿಸಿ) ಸಲ್ಲಿಸುವಂತೆ ಹಾಗೂ ಮೂಲಭೂತ ಸೌಲಭ್ಯಗಳ ವಿವರ, 8 ನೇ ತರಗತಿಯಲ್ಲಿ ವಿಧ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ವಿವರ, 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಉನ್ನತೀಕರಿಸುವ ಶಾಲೆಗಳಿಗೆ ಅವಶ್ಯವಿರುವ ಆವರ್ತಕ ಹಾಗೂ ಅನಾವರ್ತಕ ವೆಚ್ಚಗಳ ವಿವರ ಮತ್ತು ಪ್ರೌಢಶಾಲೆಗಳಾಗಿ ಮೇಲ್ದರ್ಜೆಗೇರಿಸಲು ಎಲ್ಲಾ ಮಾನದಂಡಗಳನ್ನು ಪೂರೈಸುವ ಶಾಲೆಗಳನ್ನು ಮಾತ್ರ ಪಟ್ಟಿ ಮಾಡಿ ಸಲ್ಲಿಸುವಂತೆ ಇಲಾಖೆಗೆ ತಿಳಿಸಲಾಗಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297


ಅದರಂತೆ, ಇಲಾಖಾ ಮುಖ್ಯಸ್ಥರ ಹಂತದಲ್ಲಿ ಪರಿಶೀಲಿಸಿ, ಅರ್ಹವಿರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸುವ ಸಂಬಂಧ ಸರ್ಕಾರದ ಮಂಜೂರಾತಿ ಆದೇಶ ನೀಡುವಂತೆ ಏಕ ಕಡತದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಮೇಲೆ ಓದಲಾದ ಕ್ರಮಾಂಕ (2)ರಂತೆ ಸಮಗ್ರ ಶಿಕ್ಷಣ ಕರ್ನಾಟಕ, ಕೇಂದ್ರ ಶಿಕ್ಷಣ ಮಂತ್ರಾಲಯ, ನವದೆಹಲಿ, ಇಲ್ಲಿನ GOI-MOE-PAB ಯಲ್ಲಿನ ಅನುಮೋದನೆಯಂತೆ 6 ಶಾಲೆಗಳು, CSR ಬೆಂಬಲಿತ ಸರ್ಕಾರಿ ಹಿರಿಯ ಪ್ರಾಥಮಿಕ 65 ಶಾಲೆಗಳು ಹಾಗೂ 2025-26ನೇ ಸಾಲಿಗೆ 76 ಹಿರಿಯ ಪ್ರಾಥಮಿಕ ಶಾಲೆಗಳು ಒಟ್ಟಾರೆ 147 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಪಿ 61 ಎಸ್‌ಓಹೆಚ್ 2025**

**ಬೆಂಗಳೂರು, ದಿನಾಂಕ: 07ನೇ ಆಗಸ್ಟ್ 2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಶೈಕ್ಷಣಿಕ ಸಾಲಿನಲ್ಲಿ ಅನುಬಂಧ-1ರಲ್ಲಿ ನಮೂದಿಸಿರುವಂತೆ ಒಟ್ಟು 147 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಲು ಚಾಲ್ತಿಯಲ್ಲಿರುವ ಉನ್ನತೀಕರಣದ ನಿಯಮಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 430 ವೆಚ್ಚ-8/ 2025, ದಿನಾಂಕ: 06/06/2025 ಮತ್ತು 04/08/2025ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ಪ್ರಕಾಶ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH